# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರ ಕಛೇರಿ ವಾರ್ಡ್ ಸಂಖ್ಯೆ: 138 ಛಲವಾದಿಪಾಳ್ಯ
ಬೆಂಗಳೂರು

**************************************************

ಸಂಖ್ಯೆ: W-138/Committee-07-02/2022-23 Dt: 16/07/2022

## ವಾರ್ಡ್ ಹಂತದ ಸಮಿತಿ ಸಭೆ

ವಾರ್ಡ್–138

ದಿನಾಂಕ: 16/07/2022 ರಂದು ಬೆಳಗ್ಗೆ 12.30 ಗಂಟೆಗೆ ವಾರ್ಡ್ ಸಂಖ್ಯೆ:138 ಛಲವಾದಿಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರ ಯೋಜನೆ –ದಕ್ಷಿಣ) ಬಿಬಿಎಂಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡಿನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ: 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

### <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು</u>

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯ ಬಗ್ಗೆ ಹೆಚ್ಚಿನ ಗಮನ ಹರಿಸಲು ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ತಿಳಿಸಿದರು.

ರಸ್ತೆ ಬದಿಯಲ್ಲಿ ಕಸ ಹಾಕುವವರ ಬಗ್ಗೆ ದೂರು ಬಂದಿರುವುದರಿಂದ ಎಲ್ಲಂದರಲ್ಲಿ ಕಸ ಹಾಕುವವರಿಗೆ ದಂಡ ವಿಧಿಸಲು ಮಾರ್ಷಲ್‌ಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ಗಿರಿಪುರಂ ಸುತ್ತಮುತ್ತಲಿನ ಪ್ರದೇಶದಲ್ಲಿ ಮಳೆ ಬಂದಾಗ ನೀರು ಸರಾಗವಾಗಿ ಹರಿಯದೇ ಮನೆಗಳಿಗೆ ನೀರು ನುಗ್ಗಿ ತೊಂದರೆ ಉಂಟಾಗಿರುವುದರ ಬಗ್ಗೆ ಸಾರ್ವಜನಿಕರು ತಿಳಿಸಿದರು. ಈ ಬಗ್ಗೆ ಮೋರಿಯಿಂದ ಹೂಳು ತೆಗೆಯುವ ಕಾರ್ಯವನ್ನು ಕೈಗೊಳ್ಳಲು ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ತಿಳಿಸಿದರು.

ಪೌರಕಾರ್ಮಿಕರು ಸಮಯಕ್ಕೆ ಸರಿಯಾಗಿ ಕಸ ಸಂಗ್ರಹಿಸಲು ಬರುವುದಿಲ್ಲ ಎಂಬುದಾಗಿ ಸಾರ್ವಜನಿಕರು ದೂರು ನೀಡಿರುತ್ತಾರೆ. ಅದರಂತೆ ನಿಗಧಿತ ಸಮಯದಲ್ಲಿ ಪೌರಕಾರ್ಮಿಕರು ಕೆಲಸ ನಿರ್ವಹಿಸಲು ಸೂಚಿಸಲು ನೋಡಲ್ ಅಧಿಕಾರಿಗಳು ಮಾರ್ಗದರ್ಶನ ನೀಡಿದರು.

ಕಂದಾಯ ಇಲಾಖೆಯವರಿಗೆ ಮಳೆ ಹಾನಿ ಪರಿಹಾರದ ಬಗ್ಗೆ ಒಟ್ಟು ಸ್ವೀಕೃತಿಗೊಂಡ ಅರ್ಜಿಗಳ ಬಗ್ಗೆ ವಿವರ ಕೋರಿದರು. ಈ ಬಗ್ಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ವಿವರವನ್ನು ಕುಟುಂಬ ಕಲ್ಯಾಣ ಇಲಾಖೆಯವರಿಗೆ ಸಲ್ಲಿಸಲು ಸೂಚಿಸಿದರು.

ಪ್ರ.ತಿ.ನೋ

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು ಸಭೆಯ ನಡವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ದಿನಾಂಕ: 31/07/2022 ರಂದು ಮಾನ್ಯ ನೋಡಲ್ ಅಧಿಕಾರಿಗಳು ನಿವೃತ್ತಿ ಹೊಂದಲಿರುವುದರಿಂದ ಈ ದಿನವೇ ಸರಳವಾಗಿ ಸನ್ಮಾನಿಸಿ ಶುಭಕೋರಿ ಬೀಳ್ಕೊಡುಗೆ ನೀಡಲಾಯಿತು. ಮುಂದಿನ ಸಭೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸುವಂತೆ ವಲಯ ಆಯುಕ್ತರಿಗೆ ಪತ್ರ ಬರೆಯಲು ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ಸೂಚಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

16/7/22.

ಅಧ್ಯಕ್ಷರು &
ನೋಡಲ್ ಅಧಿಕಾರಿ

ಕಾರ್ಯದರ್ಶಿ ಮತ್ತು
ಕಿರಿಯ ಅಭಿಯಂತರರು